15-16

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಮೆ: ಸೂರ್ಯ ಎನರ್ಜಿ ಪೋಟೊವೊಲ್ಟಾಯಿಕ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ವಿಜಯಪುರ ಜಿಲ್ಲೆಯ ವಿಜಯಪುರ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ತತ್ವಶಃ ಅನುಮೋದನೆ ನೀಡಿರುವ 15 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ:
1 ಸರ್ಕಾರದ ಪತ್ರ ಸಂಖ್ಯೆ: ಇಎನ್ 93 ಎನ್‌ಸಿಇ 2012 ದಿನಾಂಕ: 24.09.2012
2 ಸರ್ಕಾರದ ಪತ್ರ ಸಂಖ್ಯೆ: ಇಎನ್ 126 ಎನ್‌ಸಿಇ 2013(1)ದಿನಾಂಕ: 02.08.2013.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: KRED/08/SFEPVIPL-15 to 120 MW/Bijapur/2014/ 4211 ದಿನಾಂಕ:18.10.2014.

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ದಿನಾಂಕ: 05.05.2012 ರಂದು ನಡೆದ ಹಂಚಿಕೆ ಸಮಿತಿಯ ನಿರ್ಣಯದಂತೆ ಮೆ: ಸೂರ್ಯ ಎನರ್ಜಿ ಪೋಟೊವೊಲ್ಟಾಯಿಕ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ವಿಜಯಪುರ ಜಿಲ್ಲೆಯ ವಿಜಯಪುರ ತಾಲ್ಲೂಕಿನ ಹೊನವಾಡ್, ಕೋಟಿಯಾಲ್, ಬನ್ನೂರು ಮತ್ತು ರಾಮ್‌ಪುರ ಗ್ರಾಮಗಳಲ್ಲಿ 15 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು 1 ವರ್ಷದ ಅವಧಿಯಲ್ಲಿ ಡಿಪಿಆರ್ ಸಲ್ಲಿಸುವ ಷರತ್ತಿಗೊಳಪಟ್ಟು ಸರ್ಕಾರದಿಂದ ತತ್ವಶಃ ಅನುಮೋದನೆ ನೀಡಲಾಗಿರುತ್ತದೆ. ನಂತರ, ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಪತ್ರದಲ್ಲಿ ಸದರಿ ಯೋಜನೆಗೆ ಡಿಪಿಆರ್ ಸಲ್ಲಿಸುವ ಅವಧಿಯನ್ನು 2 ವರ್ಷಗಳಿಗೆ ವಿಸ್ತರಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು ಇವರು ಮೆ: ಸೂರ್ಯ ಎನರ್ಜಿ ಪೋಟೊವೊಲ್ಟಾಯಿಕ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಬೆಂಗಳೂರು ಕಂಪನಿಯು ತಮಗೆ ತತ್ವಶಃ ಹಂಚಿಕೆಯಾಗಿರುವ 15 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 120 ಮೆ.ವ್ಯಾ. ಸಾಮರ್ಥ್ಯಕ್ಕೆ ವೃದ್ಧಿಸಲು ಕೋರಿ ಡಿಪಿಆರ್ ಅನ್ನು ಸಲ್ಲಿಸಿದ್ದು, ಯೋಜನೆಯ ಪ್ರದೇಶವು ಖಾಸಗಿ ಭೂಮಿಯಾಗಿದ್ದು, ಹೆಚ್ಚಳಗೊಳ್ಳಲಿರುವ ಸಾಮರ್ಥ್ಯವನ್ನು ಸಹ ಸದರಿ ಸ್ಥಳದಲ್ಲಿಯೇ ಅನುಷ್ಠಾನಗೊಳಿಸುವುದಾಗಿ ತಿಳಿಸಿರುವುದನ್ನು ಪರಿಗಣಿಸಿ, ಸದರಿ ಕಂಪನಿಗೆ ಹಂಚಿಕೆಯಾಗಿರುವ 15 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು 120 ಮೆ.ವ್ಯಾಗೆ ಹೆಚ್ಚಿಸಿ, ನಿಯಮಾನುಸಾರ ಯೋಜನೆಯ ಡಿಪಿಆರ್ ಶುಲ್ಕವನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕ್ರೆಡಲ್‌ಗೆ ಸಂದಾಯ ಮಾಡುವ ಷರತ್ತಿಗೊಳಪಟ್ಟು ಹಂಚಿಕೆ ಆದೇಶವನ್ನು ನೀಡಬಹುದೆಂದು ಶಿಫಾರಸ್ಸು ಮಾಡಿ, ಸದರಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಈ ಮಧ್ಯ ಅಭಿವೃದ್ಧಿದಾರರು ದಿನಾಂಕ: 21.12.2015 ರಂದು ಸರ್ಕಾರಕ್ಕೆ ಮನವಿ ಸಲ್ಲಿಸಿ, ತಾವು ಈ ಹಿಂದೆ ಡಿಪಿಆರ್ ಸಲ್ಲಿಸುವಾಗ ಈ ಯೋಜನೆಗೆ 2.00 ಮೆ.ವ್ಯಾ. ಸಾಮರ್ಥ್ಯದ ಟರ್ಬೈನ್‌ಗಳನ್ನು ಅವಳಡಿಸಿಕೊಳ್ಳುವುದಾಗಿ ತಿಳಿಸಿದ್ದು, ಪ್ರಸ್ತುತ, ತಮ್ಮ ಕಂಪನಿಯು ಸ್ವತಃ ತಯಾರಿಸಿರುವ 3 ಮೆ.ವ್ಯಾ. ಸಾಮರ್ಥ್ಯದ ಟರ್ಬೈನ್‌ಗಳನ್ನು ಅಳವಡಿಸಿಕೊಳ್ಳಲು ಅನುಮತಿ ನೀಡುವಂತೆ ಕೋರಿರುತ್ತಾರೆ. ಅದರಂತೆ, 3MW x 40WTG ಗಳನ್ನು ಅಳವಡಿಸುವುದಾಗಿ ತಿಳಿಸಿರುತ್ತಾರೆ. ಅಲ್ಲದೇ ಯೋಜನೆಯ ಅನುಷ್ಠಾನಕ್ಕೆ ಬ್ಯಾಂಕ್‌ಗಳಿಂದ ಆರ್ಥಿಕ ಸಾಲಸೌಲಭ್ಯ ಪಡೆಯಲು ಮತ್ತು ಉತ್ತಮ ಸಹಕಾರಕ್ಕಾಗಿ ವಿದ್ಯುತ್ ಖರೀದಿ ಒಪ್ಪಂದವನ್ನು ಬೆಸ್ಕಾಂನೊಂದಿಗೆ ಮಾಡಿಕೊಳ್ಳಲು ಅನುಮತಿ ನೀಡುವಂತೆ ಕೋರಿರುತ್ತಾರೆ.

G.M
K.R.E.D.L

Wind Section
Inward No. 56
Date: 16-01-2016
Sig.

--2)

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಸಲ್ಲಿಸಿರುವ ಪ್ರಸ್ತಾವನೆ ಹಾಗೂ ಅಭಿವೃದ್ಧಿದಾರರ ಕೋರಿಕೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 240 ಎನ್‌ಸಿಇ 2014,**
**ಬೆಂಗಳೂರು, ದಿನಾಂಕ : 02.01.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು, ಮೆ: ಸೂರ್ಯ ಎನರ್ಜಿ ಫೋಟೋವೊಲ್ಟಾಯಿಕ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಬೆಂಗಳೂರು ಕಂಪನಿಯವರಿಗೆ ವಿಜಯಪುರ ಜಿಲ್ಲೆಯ ವಿಜಯಪುರ ತಾಲ್ಲೂಕಿನ ಹೊನವಾಡ್, ಕೋಟಿಯಾಲ್, ಬನ್ನೂರು ಮತ್ತು ರಾಮ್‌ಪುರ ಗ್ರಾಮಗಳಲ್ಲಿ ತತ್ವಶಃ ಹಂಚಿಕೆಯಾಗಿರುವ 15 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 120 ಮೆಗಾ ವ್ಯಾಟ್‌ಗೆ ಹೆಚ್ಚಿಸಿ, ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ನಿಬಂಧನೆ ಮತ್ತು ಷರತ್ತಿಗೊಳಪಟ್ಟು **ಹಂಚಿಕೆ** ಮಾಡಿ ಆದೇಶಿಸಲಾಗಿದೆ.

Geographical area description for 120 MW capacity wind power project

| Sl. No. | Toposheet No. | Proposed Enhaced capacity in MW | Near by villages of the proposed area and district | Geographical Area Details of the Project |
|---|---|---|---|---|
| 1 | 47 P/5 | 120 MW (3MW x 40 Nos WTG) | Honawad, Kotiyal, Bannur & Rampur in Bijapura taluk & district. | The identified area bisects by Don river. The total area is situated on the N-E of Honawad and is completely plain area and open type. The area is held in the following Geographical co-ordinates as: **Latitude**: 16°45'32"- 16°51'44" N **Longitude**: 75°21'09"- 75°30'0" E **peaks: 659, 652, 648, 649, 643, 658 & 640** m Amsl |
| | Total | 120 MW | | |

**ಷರತ್ತುಗಳು:-**

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ (ಅಂದರೆ 6 ವರ್ಷದ ಒಳಗಾಗಿ) ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.